**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ, ಹರಿಹರ**

ಓ ಎಸ್ ನಂ.159/2018

| | | |
|---|---|---|
| ಹೆಸರು | ಲಷ್ಕರ್ ಬಾಬು | ಪಿಡಬ್ಲ್ಯೂ -2 |
| ತಂದೆಯ ಹೆಸರು | ಇಮಾಮ ಸಾಬ | |
| ವಯಸ್ಸು | 34 ವರ್ಷ | |
| ಉದ್ಯೋಗ | ಟೇಲರ್ | ದಿನಾಂಕ 25.02.2022 |
| ವಾಸ ಸ್ಥಳ | ಹರಿಹರ | |

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.**

**ಮುಖ್ಯ ವಿಚಾರಣೆಃ** ವಾದಿ ಪರ ಶ್ರೀ ಆರ್ ಪಿ ವಕೀಲರಿಂದಃ

ನಾನು ಈ ದಾವೆಯಲ್ಲಿ ವಾದಿ ಇದ್ದು, ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು, ಅದರಲ್ಲಿರುವ ಎಲ್ಲಾ ಮಾಹಿತಿಗಳು ಸತ್ಯವಾಗಿದ್ದು, ಅದಕ್ಕೆ ನಾನೇ ಮಾಹಿತಿ ನೀಡಿ ಸಹಿ ಹಾಕಿರುತ್ತೇನೆ ಎಂದು ದೃಢೀಕರಿಸಿರುತ್ತೇನೆ.

ನಿಪಿ -1 ರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ನೋಡಿ ಗುರುತಿಸಿದ್ದು, ಅದನ್ನು ನಿಪಿ -1 (ಬಿ) ಎಂದು ಗುರುತಿಸಲಾಯಿತು. ನಿಪಿ -1 ನ್ನು 1 ನೇ ಪ್ರತಿವಾದಿಯ ಗಂಡ ಶ್ರೀನಿವಾಸರಾವ್ ವಾದಿಗೆ ಬರೆದುಕೊಟ್ಟಿರುತ್ತಾನೆ. ಅದಕ್ಕೆ ನಾನು ಸಾಕ್ಷಿಯಾಗಿ ಸಹಿ ಹಾಕಿರುತ್ತೇನೆ. ಸದರಿ ಶ್ರೀನಿವಾಸರಾವ್ ರವರ ಸಹಿಯನ್ನು ನೋಡಿದರೆ ಗುರುತಿಸುತ್ತೇನೆ. ಅದನ್ನು ಈಗಾಗಲೇ ನಿಪಿ -1 (ಎ) ಎಂದು ಗುರುತಿಸಲಾಗಿರುತ್ತದೆ. ಅದೇ ರೀತಿ ನಿಪಿ -1 ನ್ನು ಬರೆದ ವೆಂಕಟಗಿರಿ ರವರ ಸಹಿಯನ್ನು ಗುರುತಿಸುತ್ತೇನೆ. ಅದನ್ನು ನಿಪಿ -1 (ಸಿ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ** ಪ್ರತಿವಾದಿ ಪರ ವಕೀಲರಿಂದ

(ಈ ಹಂತದಲ್ಲಿ ಪ್ರತಿವಾದಿ ಪರ ವಕೀಲರು ಪಾಟಿಸವಾಲಿಗೆ ಕಾಲಾವಕಾಶ ಕೋರುತ್ತಿದ್ದು ಮಂಜೂರು ಮಾಡಿ ಮುಂದೂಡಲಾಯಿತು.)

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

Sd/-

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು

ಮತ್ತು ಜೆ ಎಂ ಎಫ್ ಸಿ, ಹರಿಹರ